# Akashvani : Bangalore
## Regional Bulletin In Kannada
**19.08.2026 / 18.40 hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

೧. ಸಚಿವ ನಾಗೇಂದ್ರ ರಾಜೀನಾಮೆಗೆ ಆಗ್ರಹಿಸಿ ವಿಧಾನಸಭೆಯಲ್ಲಿ ಪ್ರತಿಪಕ್ಷಗಳಿಂದ ಸದನದ ಬಾವಿಗಿಳಿದು ಧರಣಿ - ಕಲಾಪ ನಾಳೆಗೆ ಮುಂದೂಡಿಕೆ

೨. ರಾಜ್ಯದಲ್ಲಿ ಮೂರು ಕೋಟಿ ೨೫ ಲಕ್ಷಕ್ಕೂ ಅಧಿಕ ಎಕರೆ ಸರ್ಕಾರಿ ಭೂಮಿ ; ಮೇಲ್ಮನೆಯಲ್ಲಿ ಉಪಮುಖ್ಯಮಂತ್ರಿ ಸ್ಪಷ್ಟನೆ

೩. ಕೋಲಾರದಲ್ಲಿ ನೂತನ ಬಾಟ್ಲಿಂಗ್ ಯಂತ್ರಗಳ ಉತ್ಪಾದನಾ ಸ್ಥಾವರಕ್ಕೆ ಸಚಿವ ಎಂ.ಬಿ.ಪಾಟೀಲ್ ಚಾಲನೆ

೪. ವಾಲ್ಮೀಕಿ ನಿಗಮದಲ್ಲಿ ನಡೆದ ಹಗರಣದಲ್ಲಿ ತಮ್ಮ ಪಾತ್ರವಿಲ್ಲ - ಸಚಿವ ಬಿ.ನಾಗೇಂದ್ರ ಸ್ಪಷ್ಟನೆ

೫. ಅಭಿಮನ್ಯು ಆನೆಗೆ ರಾಜೋಚಿತ ಬೀಳ್ಕೊಡುಗೆ ನೀಡುವಂತೆ ಅರಣ್ಯ ಸಚಿವರಿಗೆ, ಸಚಿವ ಈಶ್ವರ್ ಬಿ. ಖಂಡ್ರೆ ಪತ್ರ

---

ವಿಧಾನಸಭೆಯಲ್ಲಿಂದು ಸಚಿವ ನಾಗೇಂದ್ರ ರಾಜೀನಾಮೆಗೆ ಆಗ್ರಹಿಸಿ ಪ್ರತಿಪಕ್ಷಗಳ ಸದಸ್ಯರು ಪ್ರತಿಭಟನೆ ನಡೆಸಿದರು. ಭೋಜನ ವಿರಾಮದ ಬಳಿಕ ಸದನ ಸೇರಿದಾಗ ಕಲಾಪ ಸುಗಮವಾಗಿ ನಡೆಸಲು ಅವಕಾಶ ಮಾಡಿಕೊಡಬೇಕೆಂದು ಸಭಾಧ್ಯಕ್ಷರು ಮನವಿ ಮಾಡಿದರು. ಸದಸ್ಯರ ಗದ್ದಲದ ನಡುವೆಯೇ ಪ್ರಶ್ನೋತ್ತರ ಕಲಾಪವನ್ನು ಕೈಗೆತ್ತಿಕೊಂಡರು. ಬಳಿಕ ಸಭಾಧ್ಯಕ್ಷರು ಕೆಲವು ವಿಧೇಯಕಗಳನ್ನು ಮಂಡಿಸಲು ಸಂಬಂಧಪಟ್ಟ ಸಚಿವರಿಗೆ ಸೂಚಿಸಿದರು. ಸಚಿವ ಕೃಷ್ಣಬೈರೇಗೌಡ ಕರ್ನಾಟಕ ಅಪಾರ್ಟ್‌ಮೆಂಟ್ ಮಾಲೀಕತ್ವ ಮತ್ತು ನಿರ್ವಹಣೆ ವಿಧೇಯಕ -೨೦೨೪, ಕರ್ನಾಟಕ ನಗರ ಪಾಲಿಕೆಗಳ ತಿದ್ದುಪಡಿ ವಿಧೇಯಕ, ಕರ್ನಾಟಕ ಮುನಿಸಿಪಾಲಿಟಿ ತಿದ್ದುಪಡಿ ವಿಧೇಯಕ ಮಂಡಿಸಿದರು. ಈ ನಡುವೆ ಸದಸ್ಯರು ಸದನದಲ್ಲಿ ಭಿತ್ತಿಪತ್ರಗಳನ್ನು ಹಿಡಿದು ಸಚಿವ ನಾಗೇಂದ್ರ ವಿರುದ್ಧ ಘೋಷಣೆಗಳನ್ನು ಕೂಗಿ ರಾಜೀನಾಮೆಗೆ ಆಗ್ರಹಿಸಿದರು. ಪ್ರತಿಪಕ್ಷಗಳ ಸದಸ್ಯರು ಸದನದ ಬಾವಿಗಿಳಿದು ಪ್ರತಿಭಟನೆ ನಡೆಸಿದರು. ಸದನ ಸಹಜ ಸ್ಥಿತಿಗೆ ಬಾರದ ಹಿನ್ನೆಲೆಯಲ್ಲಿ ಸಭಾಧ್ಯಕ್ಷರು ಕಲಾಪವನ್ನು ನಾಳೆಗೆ ಮುಂದೂಡಿದರು.

---

ರಾಜ್ಯದಲ್ಲಿ ಅರಣ್ಯ ಮತ್ತು ಕೃಷಿ ಭೂಮಿ ಹೊರತುಪಡಿಸಿ ಒಟ್ಟು ಮೂರು ಕೋಟಿ ೨೫ ಲಕ್ಷದ ಒಂದು ಸಾವಿರದ ೭೦೭ ಎಕರೆ ಸರ್ಕಾರಿ ಭೂಮಿ ವಿಸ್ತೀರ್ಣವಿದೆ ಎಂದು ಉಪಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಮೇಲ್ಮನೆಯಲ್ಲಿಂದು ಸದಸ್ಯ ಶಿವಕುಮಾರ್ ಪ್ರಶ್ನೆಗೆ ಉತ್ತರಿಸಿದ ಅವರು, ಷರತ್ತು ಉಲ್ಲಂಘಿಸಿರುವ ಪ್ರಕರಣಗಳಲ್ಲಿ ಕಾನೂನು ಕ್ರಮ ಜರುಗಿಸುವಂತೆ ಜಿಲ್ಲಾಧಿಕಾರಿಗೆ ಸೂಚನೆ ನೀಡಲಾಗಿದೆ ಎಂದು ಹೇಳಿದ್ದಾರೆ. ಗ್ರಾಮೀಣ ಜನವಸತಿ ಪ್ರದೇಶದ ಎಲ್ಲಾ ಆಸ್ತಿಗಳಿಗೆ ಹಕ್ಕು ದಾಖಲೆಗಳನ್ನು ಸಿದ್ಧಪಡಿಸಿ ವಿತರಿಸಲಾಗುತ್ತಿದೆ ಎಂದು ಮಾಹಿತಿ ನೀಡಿದ್ದಾರೆ. ಗ್ರಾಮ ನಕಾಶೆಗಳನ್ನು ನಿರ್ಧಿಷ್ಟ ಸಂಖ್ಯೆಯ ವರ್ಷಗಳಿಗೊಮ್ಮೆ ಕಡ್ಡಾಯವಾಗಿ ಇಂಡೀಕರಿಸಬೇಕೆಂಬ ಬಗ್ಗೆ ಯಾವುದೇ ಕಾಲ ಮಿತಿ ನಿಗದಿಪಡಿಸಿಲ್ಲ ಎಂದು ತಿಳಿಸಿದ್ದಾರೆ.

---

ಕೋಲಾರದ ವೇಮಗಲ್ ಕೈಗಾರಿಕಾ ಪ್ರದೇಶದಲ್ಲಿ ಕ್ರೋನ್ಸ್ ಕಂಪನಿಯು ೧೭ ಸಾವಿರ ಚದರ ಮೀಟರ್‌ನಷ್ಟು ವಿಸ್ತಾರದ ಉತ್ಪಾದನಾ ಘಟಕ ನಿರ್ಮಿಸಿದೆ. ಇದಕ್ಕಾಗಿ ಕಂಪನಿಯು ೩೧೫ ಕೋಟಿ ರೂಪಾಯಿ ವಿನಿಯೋಗಿಸಿದ್ದು, ೪೦೦ ಉದ್ಯೋಗಗಳು ಸೃಷ್ಟಿಯಾಗಲಿವೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ. ಪಾನೀಯ, ದ್ರವ ಆಹಾರ ಸಂಸ್ಕರಣೆ ಮತ್ತು ಪ್ಯಾಕೇಜಿಂಗ್ ಕ್ಷೇತ್ರಗಳಲ್ಲಿ ಮುಂಚೂಣಿಯಲ್ಲಿರುವ

ಜರ್ಮನಿ ಮೂಲದ ಕ್ರೋನ್ಸ್ ಕಂಪನಿಯು ದಾಖಲೆ ಅವಧಿಯಲ್ಲಿ ನಿರ್ಮಿಸಿರುವ ನೂತನ ಬಾಟ್ಲಿಂಗ್ ಯಂತ್ರಗಳ ಉತ್ಪಾದನಾ ಸ್ಥಾವರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಕಂಪನಿಗಳು ಸ್ಥಳೀಯ ಯುವಜನರಿಗೆ ವಿದ್ಯಾರ್ಹತೆಗೆ ತಕ್ಕ ಉದ್ಯೋಗ ನೀಡುವಂತೆ ತಿಳಿಸಿದ್ದಾರೆ. ಕೇವಲ ೧೮ ತಿಂಗಳಲ್ಲಿ ಈ ಭವ್ಯ ಸ್ಥಾವರ ತಲೆ ಎತ್ತಿದೆ. ಇದೊಂದು ವಿಶಿಷ್ಟ ದಾಖಲೆಯಾಗಿದ್ದು, ಹೂಡಿಕೆದಾರರಿಗೆ ಒಳ್ಳೆಯ ಸಂದೇಶ ರವಾನಿಸುತ್ತಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಈ ಘಟಕ ಭಾರತದ ಮಾರುಕಟ್ಟೆಗೆ ಉನ್ನತ ಗುಣಮಟ್ಟದ ಎರ್ಗೋಬ್ಲಾಕ್ ಪ್ಯಾಕೇಜಿಂಗ್ ಯಂತ್ರಗಳನ್ನು ಉತ್ಪಾದಿಸಲಿದೆ ಎಂದು ತಿಳಿಸಿದ್ದಾರೆ.

---

ವಾಲ್ಮೀಕಿ ನಿಗಮದಲ್ಲಿ ನಡೆದ ಹಗರಣದಲ್ಲಿ ತಾವು ಅಪರಾಧಿ ಅಲ್ಲ ಎಂದು ಸಚಿವ ಬಿ.ನಾಗೇಂದ್ರ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ನಾಯಕರು ಮಾಡುತ್ತಿರುವ ಆರೋಪಗಳು ರಾಜಕೀಯ ಪ್ರೇರಿತ ಎಂದು ದೂರಿದ್ದಾರೆ. ಸದನದಲ್ಲಿ ಈ ಕುರಿತಂತೆ ಚರ್ಚೆಗೆ ಬನ್ನಿ ಎಂದು ಪ್ರತಿಪಕ್ಷಗಳಿಗೆ ಆಹ್ವಾನ ನೀಡಿದ್ದಾರೆ. ಪ್ರಕರಣ ನ್ಯಾಯಾಲಯದಲ್ಲಿದ್ದು, ಬಿಜೆಪಿ ನಾಯಕರು ತಮ್ಮನ್ನು ತಪ್ಪಿತಸ್ಥರಂತೆ ಬಿಂಬಿಸುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

---

ಮೈಸೂರು ದಸರಾದಲ್ಲಿ ಆರು ಬಾರಿ ಚಿನ್ನದ ಅಂಬಾರಿ ಹೊತ್ತ ೬೦ ವರ್ಷದ ಕ್ಯಾಪ್ಟನ್ ಅಭಿಮನ್ಯು ಆನೆಗೆ ಈ ಬಾರಿ ದಸರಾ ಜಂಬೂ ಸವಾರಿಯಲ್ಲಿ ಪಾಲ್ಗೊಳ್ಳಲು ಅವಕಾಶ ನೀಡಿ, ರಾಜೋಚಿತ ಬೀಳ್ಕೊಡುಗೆ ನೀಡುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ್ ಬಿ. ಖಂಡ್ರೆ ಮನವಿ ಮಾಡಿದ್ದಾರೆ. ಈ ಕುರಿತಂತೆ ಅರಣ್ಯ ಸಚಿವ ರಾಮಲಿಂಗಾರೆಡ್ಡಿ ಅವರಿಗೆ ಪತ್ರ ಬರೆದಿರುವ ಅವರು, ಅಭಿಮನ್ಯುಗೆ ನಾಡಿನಾದ್ಯಂತ ದೊಡ್ಡ ಅಭಿಮಾನಿ ಬಳಗವೇ ಇದೆ ಏಕಾಏಕಿ ಅಭಿಮನ್ಯುವನ್ನು ದಸರಾ ಮಹೋತ್ಸವದಿಂದ ಹೊರಗಿಡುವ ಬದಲು ನಿಶಾನೆ ಆನೆಯಾಗಿ ಬಳಸಿ ರಾಜೋಚಿತ ಬೀಳ್ಕೊಡುಗೆ ನೀಡಬೇಕು ಎಂದು ಮನವಿ ಮಾಡಿದ್ದಾರೆ. ಈ ಬಾರಿ ದಸರಾ ಮಹೋತ್ಸವದಿಂದ ಅಭಿಮನ್ಯುವನ್ನು ಕೈಬಿಟ್ಟಿರುವುದು ಲಕ್ಷಾಂತರ ಅಭಿಮಾನಿಗಳಿಗೆ ಆಘಾತ ತಂದಿದೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ. ೫೯ ವರ್ಷ ವಯಸ್ಸಿನ ಅಭಿಮನ್ಯು ೩೦೦ಕ್ಕೂ ಹೆಚ್ಚು ಆನೆ ಸೆರೆ ಕಾರ್ಯಾಚರಣೆ ಹಾಗೂ ೮೦ಕ್ಕೂ ಹೆಚ್ಚು ಹುಲಿ ಸೆರೆ ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದಾನೆ ಎಂದು ಈಶ್ವರ್ ಖಂಡ್ರೆ ಹೇಳಿದ್ದಾರೆ.

---

ಜಿಬಿಎ ವ್ಯಾಪ್ತಿಯಲ್ಲಿ ಈವರೆಗೆ ೯೬೪ ಕಿಲೋಮೀಟರ್ ಪಾದಚಾರಿ ಮಾರ್ಗಗಳ ಒತ್ತುವರಿಯನ್ನು ತೆರವುಗೊಳಿಸಲಾಗಿದೆ ಎಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣಬೈರೇಗೌಡ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ನಡೆದ ವರ್ಚುವಲ್ ಸಭೆ ಉದ್ದೇಶಿಸಿ ಮಾತನಾಡಿದ ಅವರು, ಬಾಕಿಯಿರುವ ಒತ್ತುವರಿಗಳನ್ನು ಆಗಸ್ಟ್ ತಿಂಗಳೊಳಗಾಗಿ ತೆರವುಗೊಳಿಸುವಂತೆ ಸೂಚಿಸಿದ್ದಾರೆ. ಬೀದಿ ವ್ಯಾಪಾರಿಗಳು ಮತ್ತೆ ಒತ್ತುವರಿ ಮಾಡಿದರೆ ದುಪ್ಪಟ್ಟು ದಂಡ ವಿಧಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ತ್ಯಾಜ್ಯದಿಂದ ಸ್ವಾತಂತ್ರ್ಯ ಅಭಿಯಾನ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ ನಿರ್ದೇಶನ ನೀಡಿದ್ದಾರೆ.

---

ಭಾರತದ ಅತಿದೊಡ್ಡ ಕಾಫಿ ಉತ್ಸವ ಫೆಬ್ರವರಿಯಲ್ಲಿ ನಡೆಯಲಿದೆ. ಫೆಬ್ರವರಿ ೨೬ರಿಂದ ೨೮ರವರೆಗೆ ಬೆಂಗಳೂರಿನ ಜಯಮಹಲ್ ಮುಖ್ಯರಸ್ತೆಯಲ್ಲಿರುವ ಚಾಮರ ವಜ್ರದಲ್ಲಿ ನಡೆಯಲಿದ್ದು, ಈ ಉತ್ಸವವು ಭಾರತೀಯ ಕಾಫಿ ಬೆಳವಣಿಗೆಯ ಪಯಣದಲ್ಲಿ ಮಹತ್ವದ ಮೈಲಿಗಲ್ಲಾಗಲಿದೆ ಎಂದು ಕಾಫಿ ಬೋರ್ಡ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ಕೂರ್ಮಾರಾವ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉತ್ಪಾದಕತೆಯಿಂದ ಕಪ್‌ನವರೆಗೆ ಎಂಬ ಪರಿಕಲ್ಪನೆಯಡಿ ಆಯೋಜಿಸಲಾಗಿರುವ ಈ ಉತ್ಸವ ಭಾರತದ ವೈವಿಧ್ಯಮಯ ಕಾಫಿ ಬೆಳೆಯುವ ಪ್ರದೇಶಗಳ ವೈಶಿಷ್ಟತೆ ಮತ್ತು ಶ್ರೀಮಂತಿಕೆಯನ್ನು ಅನಾವರಣಗೊಳಿಸಲಿದೆ ಎಂದು ಹೇಳಿದ್ದಾರೆ.

---

ಬೆಂಗಳೂರಿನ ಇಟಲಿಯ ಕಾನ್ಸುಲೇಟ್ ಜನರಲ್ ಮತ್ತು ಬೆಂಗಳೂರಿನ ರಾಷ್ಟ್ರೀಯ ಆಧುನಿಕ ಕಲಾ ಸಂಗ್ರಹಾಲಯ ಕೇಂದ್ರ ಸಂಸ್ಕೃತಿ ಸಚಿವಾಲಯದ ಸಹಯೋಗದಲ್ಲಿ ತಾಯಿಯೊಬ್ಬಳು ಮಾತೃಭಾಷೆ ಹಲವು ಪ್ರದರ್ಶನ ಪ್ರಸ್ತುತ ಪಡಿಸುತ್ತಿದೆ.

ನಾಳೆಯಿಂದ ಸೆಪ್ಟೆಂಬರ್ ೨೦ರವರೆಗೆ ಬೆಂಗಳೂರಿನ ರಾಷ್ಟ್ರೀಯ ಆಧುನಿಕ ಕಲಾ ಸಂಗ್ರಹಾಲಯದಲ್ಲಿ ಕಲಾಕೃತಿಗಳ ಪ್ರದರ್ಶನ ನಡೆಯಲಿದೆ.

ಈ ಪ್ರದರ್ಶನದ ಪ್ರಮುಖ ಆಕರ್ಷಣೆ ಸ್ಯಾಂಡ್ರೋ ಬಾಟಿಚೆಲ್ಲಿಯವರ ಮಡೋನಾ ಮತ್ತು ಮಗು ಕಲಾಕೃತಿಯು ಇದೇ ಮೊದಲ ಬಾರಿಗೆ ಭಾರತಕ್ಕೆ ಆಗಮಿಸಿದೆ. ದೆಹಲಿ ಪ್ರದರ್ಶನದ ಬಳಿಕ ಬೆಂಗಳೂರಿನಲ್ಲಿ ಪ್ರದರ್ಶನಕ್ಕಿಡಲಾಗುತ್ತಿದೆ. ಈ ಕಲಾಕೃತಿಯು ಪುನರುಜ್ಜೀವನ ಕಾಲದ ಕಲಾವಿದರೊಬ್ಬರ ಕಲಾಕೃತಿಗಳ ಜೊತೆಗೆ ಪುರಾತನ ಎಟ್ರುಸ್ಕನ್ ಶಿಲ್ಪಗಳು ಮತ್ತು ಭಾರತದ ಧಾರ್ಮಿಕ ಕಲಾಕೃತಿಗಳು ಒಂದೇ ನೆಲೆಯಲ್ಲಿ ಪ್ರದರ್ಶನಗೊಳ್ಳಲಿವೆ.

---

ಹನೂರು ಶೂಟೌಟ್ ಪ್ರಕರಣಕ್ಕೆ ಸಂಬಂಧಿಸಿದಂತೆ ಅರಣ್ಯಾಧಿಕಾರಿಗಳು ತಮ್ಮ ಸಿಬ್ಬಂದಿಯನ್ನು ವಿಚಾರಣೆಗೆ ಒಳಪಡಿಸಿದ್ದಾರೆ. ಶೂಟೌಟ್ ನಡೆದ ಸಂದರ್ಭದಲ್ಲಿ ಕಳ್ಳಬೇಟೆಗಾರರು ಕಾಡಿಗೆ ಪ್ರವೇಶಿಸಿದ ಮೇರೆಗೆ ಒಟ್ಟು ೧೨ ಮಂದಿ ಎರಡು ತಂಡಗಳಾಗಿ ಕಾರ್ಯಾಚರಣೆಗೆ ಇಳಿದಿದ್ದರು. ಈ ಎಲ್ಲಾ ಸಿಬ್ಬಂದಿಯನ್ನು ಅರಣ್ಯಾಧಿಕಾರಿಗಳು ಪ್ರತ್ಯೇಕವಾಗಿ ವಿಚಾರಣೆಗೆ ಒಳಪಡಿಸಿದ್ದಾರೆ.  ಕಾವೇರಿ ವನ್ಯಜೀವಿಧಾಮದ ಎಸಿಎಫ್ ಮರಿಸ್ವಾಮಿ, ಪ್ರತಿಕ್ರಿಯಿಸಿದ್ದು, ೧೨ ಸಿಬ್ಬಂದಿಯ ವಿಚಾರಣೆ ನಡೆಸಲಾಗಿದೆ. ಆತ್ಮರಕ್ಷಣೆಗಾಗಿ ತಾವು ಗುಂಡು ಹಾರಿಸಿದ್ದು ಎಲ್ಲಾ ವಿವರಣೆ ಪಡೆಯಲಾಗಿದೆ ಎಂದು ತಿಳಿಸಿದ್ದಾರೆ.

ಈ ನಡುವೆ ಘಟನೆಯ ಸತ್ಯಾಸತ್ಯತೆ ತಿಳಿಯಲು ಬಿಜೆಪಿಯು ಸತ್ಯಶೋಧನಾ ಸಮಿತಿ ರಚಿಸಿದೆ.  ಮೃತ ಕುಟುಂಬಸ್ಥರ ಮನೆಗಳಿಗೆ ಭೇಟಿ ನೀಡಿ ಘಟನೆ ನಡೆದ ದಿನ ಹಾಗೂ ಹಿಂದಿನ ದಿನದ ಮಾಹಿತಿಯನ್ನು ಸಂಗ್ರಹಿಸಿದೆ.

---

ಕರಾವಳಿ ಕರ್ನಾಟಕದ ಸಣ್ಣ ಮತ್ತು ಮಧ್ಯಮ ಉದ್ಯಮಗಳು ಹಾಗೂ ನವೋದ್ಯಮಿಗಳಿಗೆ ಉತ್ತೇಜನ ನೀಡುವ ಉದ್ದೇಶದಿಂದ ಇದೇ ೨೧ರಂದು  ಮಂಗಳೂರಿನಲ್ಲಿ ಕೋಸ್ಟಲ್ ಎಂಎಸ್ಎಂಇ - ಸ್ಟಾರ್ಟ್‌ಅಪ್ ಕಾಂಕ್ಲೇವ್-೨೦೨೬ ಸಮಾವೇಶ ಆಯೋಜಿಸಲಾಗಿದೆ.

ಮಂಗಳೂರಿನಲ್ಲಿಂದು ಮಾತನಾಡಿದ ಸಮಾವೇಶದ ನಿರ್ದೇಶಕ ಎಸ್.ಎಸ್.ನಾಯಕ್, ಈ ಬಾರಿಯ ಸಮಾವೇಶದಲ್ಲಿ ಪ್ರಮುಖ ಉದ್ಯಮಿಗಳು, ನವೋದ್ಯಮಿಗಳು ಸೇರಿದಂತೆ ೪೦೦ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಲಿದ್ದಾರೆ. ತಂತ್ರಜ್ಞಾನ ವಲಯ, ವ್ಯಾಪಾರ, ವಾಣಿಜ್ಯ, ಪ್ರವಾಸೋದ್ಯಮ, ಉತ್ಪಾದನೆ, ಸೇವಾ ವಲಯ ಮತ್ತು ಆರೋಗ್ಯ ಕ್ಷೇತ್ರದ ಪ್ರಮುಖರು, ಹೂಡಿಕೆದಾರರು, ಕೈಗಾರಿಕಾ ಮುಖಂಡರು, ನೀತಿ ನಿರೂಪಕರು ಹಾಗೂ ಬ್ಯಾಂಕಿಂಗ್ ಕ್ಷೇತ್ರದ ಪಾಲುದಾರರನ್ನು ಒಂದೇ ವೇದಿಕೆಯಲ್ಲಿ ಒಟ್ಟುಗೂಡಿಸುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದ್ದಾರೆ.

__________ ಮುಕ್ತಾಯ ___________